# ಕರ್ನಾಟಕ ವಿಧಾನ ಪರಿಷತ್ತು

## ಶ್ರೀ ಟಿ.ಎ. ಶರವಣ ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು ಇವರ 330 ರ ನಿಯಮದ ಮೇರೆಗೆ ಸೂಚನೆಗೆ ಉತ್ತರ

*********

**ಪ್ರಶ್ನೆ:-**

ಕಡತ ಸಂಖ್ಯೆ: MWD 56 LMQ 2025 ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಸದನಕ್ಕೆ ತಿಳಿಸಿರುವಂತೆ ದಿನಾಂಕ:22.07.2024 ರಿಂದ ರೂ.600.00 ಕೋಟಿಗಳ ಅನುದಾನವನ್ನು ಕಾಲೋನಿಗಳ ಅಭಿವೃದ್ಧಿಗೆ ಬಿಡುಗಡೆ ಮಾಡಿರುವುದಾಗಿ ತಿಳಿಸಿರುತ್ತಾರೆ, ಆದರೆ ಮೇಲಿನ ಮೊತ್ತದ ಅನುದಾನವನ್ನು ಬಿಡುಗಡೆ ಮಾಡುವಾಗ ಇಲಾಖೆಯಲ್ಲಿ ಯಾವ ಮೂಲಗಳಿಂದ ಅನುದಾನ ಲಭ್ಯತೆಯಾಗಿರುವ ಬಗ್ಗೆ ಮಾಹಿತಿ ಒದಗಿಸುವುದು, ಹಾಗೂ ದಿನಾಂಕ:22.07.2024 ರಿಂದ ಮಂಡ್ಯ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಅಲ್ಪಸಂಖ್ಯಾತರ ಕಾಲೋನಿಗಳ ಅಭಿವೃದ್ಧಿ ಪಡಿಸಲು MWD-MDS/389/2024 ಕಡತವು ಸಲ್ಲಿಕೆಯಾಗಿದ್ದು, ಈಗಾಗಲೇ ಈ ಕಡತದ ವಿಚಾರವಾಗಿ ಮಾನ್ಯ ಸಚಿವರು ಅನುದಾನ ಬಿಡುಗಡೆ ಮಾಡುವ ಕುರಿತು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ ಎಂದು ಸದನದಲ್ಲಿ ತಿಳಿಸಿದ್ದು, ಆದರೆ ಇಲ್ಲಿಯವರೆಗೆ ಅನುದಾನ ಬಿಡುಗಡೆ ಮಾಡದಿರಲು ಕಾರಣವೇನು, ಮೇಲಿನ ರೂ.600.00 ಕೋಟಿಗಳ ಅನುದಾನವನ್ನು ಕಾಲೋನಿಗಳ ಅಭಿವೃದ್ಧಿಗೆ ಬಿಡುಗಡೆ ಮಾಡುವಾಗ ಅನುಸರಿಸಲಾಗಿದೆ ಎಂಬ ವಿಷಯದ ಬಗ್ಗೆ ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಸಚಿವರಲ್ಲಿ ಪ್ರಸ್ತಾಪಿಸಬಯಸುತ್ತೇನೆ.

**ಉತ್ತರ:-**

2023-24ನೇ ಸಾಲಿನಲ್ಲಿ ರಾಜ್ಯದ 176 ವಿಧಾನ ಸಭಾ ಕ್ಷೇತ್ರಗಳಲ್ಲಿ ಅಲ್ಪಸಂಖ್ಯಾತರು ವಾಸಿಸುತ್ತಿರುವ ಪ್ರದೇಶಗಳ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯವನ್ನು ಒದಗಿಸುವ ನಿಟ್ಟಿನಲ್ಲಿ ರೂ.1000.00 ಕೋಟಿಗಳ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ಮೊದಲನೇ ಕಂತಿನಲ್ಲಿ ರೂ.306.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿರುತ್ತದೆ 2024-25ನೇ ಸಾಲಿನ ಆಯವ್ಯಯದಲ್ಲಿ ಸದರಿ ಯೋಜನೆಯಡಿ ರೂ.500.00 ಕೋಟಿಗಳ ಅನುದಾನವನ್ನು ನಿಗದಿಪಡಿಸಲಾಗಿದ್ದು, ಸದರಿ ಅನುದಾನದಲ್ಲಿ 2022-23 & 2023-24ನೇ ಸಾಲಿನ ಕ್ರಿಯಾ ಯೋಜನೆಯಂತೆ ಬಾಕಿ ಇದ್ದ ವಿಧಾನಸಭಾ ಕ್ಷೇತ್ರಗಳ ಕಾಮಗಾರಿಗಳಿಗೆ ಹಣಬಳಕೆ ಪ್ರಮಾಣ ಪತ್ರ ಸ್ವೀಕೃತಿ ಆಧಾರದ ಮೇಲೆ ರೂ.263.17 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.

ಮುಂದುವರೆದು, 2023-24ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿಗೆ ಮಂಜೂರು ಮಾಡದಿರುವ ವಿಧಾನಸಭಾ ಕ್ಷೇತ್ರಗಳಿಗೆ ಮೂಲಭೂತ ಸೌಕರ್ಯವನ್ನು ಒದಗಿಸಲು ಹಾಗೂ ಅತೀ ಹಿಂದುಳಿದ ಮತ್ತು ಮೂಲಭೂತ ಸೌಕರ್ಯಗಳು ಅತೀ ಅವಶ್ಯವಿರುವ ಸ್ಲಂಗಳನ್ನು ಮಾದರಿ ಕಾಲೋನಿಗಳನ್ನಾಗಿ ಅಭಿವೃದ್ಧಿ ಪಡಿಸಲು 2024-25ನೇ ಸಾಲಿನಲ್ಲಿ ರೂ.236.83 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.

...2

ಮುಂದುವರೆದು, 2023-24 ಮತ್ತು 2024-25ನೇ ಸಾಲಿನಲ್ಲಿ ಮಂಡ್ಯ ಜಿಲ್ಲೆಗಳಲ್ಲಿನ ಎಲ್ಲಾ ವಿಧಾನಸಭಾ ಕ್ಷೇತ್ರಗಳಿಗೆ ಒಟ್ಟು ರೂ.40.00 ಕೋಟಿಗಳನ್ನು ಹಾಗೂ ಮಂಡ್ಯ ನಗರದಲ್ಲಿ ಅತೀ ಹಿಂದುಳಿದಿರುವ ಸ್ಲಂಗಳನ್ನು ಮಾದರಿ ಕಾಲೋನಿಗಳನ್ನಾಗಿ ಅಭಿವೃದ್ಧಿ ಪಡಿಸಲು ರೂ.9.95 ಕೋಟಿಗಳು ಒಟ್ಟಾರೆಯಾಗಿ ರೂ.49.95 ಕೋಟಿಗಳನ್ನು ಮಂಜೂರು ಮಾಡಲಾಗಿರುತ್ತದೆ.

ಮಂಡ್ಯ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಅಲ್ಪಸಂಖ್ಯಾತರ ಸಮುದಾಯದ ಜನರು ವಾಸಿಸುತ್ತಿರುವ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಕಡತ ಸಂಖ್ಯೆ MWD-MDS/389/2024-HAJ-MWDರಲ್ಲಿ ಪರಿಶೀಲನೆಯಲ್ಲಿರುತ್ತದೆ.

**ಕಡತಸಂಖ್ಯೆ:** MWD 75 LMQ 2025

**(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು